ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ : 2013–14ನೇ ಸಾಲಿನಲ್ಲಿ ರಾಷ್ಟ್ರೀಯ ಜೈವಾನಿಲ ಯೋಜನೆಯಡಿ 2012–13ನೇ ಸಾಲಿನಲ್ಲಿ ನಿರ್ಮಿಸಲಾದ ಅನಿಲ ಸ್ಥಾವರಗಳಿಗೆ ಬಾಕಿ ರಾಜ್ಯ ಸಹಾಯಧನ ಪಾವತಿಸಲು ಅನುದಾನ ಬಿಡುಗಡೆ ಮಾಡುವ – ಕುರಿತು.

ಉಲ್ಲೇಖ : ಸರ್ಕಾರದ ಆದೇಶ ಸಂಖ್ಯೆ : ಗ್ರಾಅಪ 27 ಜೈಅಯೋ 2013, ಬೆಂಗಳೂರು ದಿನಾಂಕ : 06.11.2013

## ತಿದ್ದುಪಡಿ ಆದೇಶ

**ಸರ್ಕಾರದ ಆದೇಶ ಸಂಖ್ಯೆ : ಗ್ರಾಅಪ 27 ಜೈಅಯೋ 2013, ಬೆಂಗಳೂರು ದಿನಾಂಕ : 12.11.2013**

ಉಲ್ಲೇಖಿತ ಸರ್ಕಾರಿ ಆದೇಶ ದಿ. 06.11.2013ರ ಪ್ರಸ್ತಾವನೆಯಲ್ಲಿ ತಿಳಿಸಲಾಗಿರುವ ಜಿಲ್ಲೆಗಳ ಬದಲಿಗೆ **ಉತ್ತರ ಕನ್ನಡ, ಬೆಳಗಾವಿ, ಬಿಜಾಪುರ, ದಾವಣಗೆರೆ, ಧಾರವಾಡ, ರಾಮನಗರ, ತುಮಕೂರು ಮತ್ತು ಶಿವಮೊಗ್ಗ ಜಿಲ್ಲೆಗಳು** ಎಂದು ಓದಿಕೊಳ್ಳತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

ಕೆ.ವಿ.ಶಿವಕುಮಾರ್
(ಕೆ. ವಿ. ಶಿವಕುಮಾರ್)
ಉಪ ನಿರ್ದೇಶಕರು (ಜೈವಾನಿಲ), ಗ್ರಾಮೂಸೌ–2
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಗೆ,

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ಉತ್ತರ ಕನ್ನಡ, ಬೆಳಗಾವಿ, ಬಿಜಾಪುರ, ದಾವಣಗೆರೆ, ಧಾರವಾಡ, ರಾಮನಗರ, ತುಮಕೂರು ಮತ್ತು ಶಿವಮೊಗ್ಗ
3. ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ಬೆಂಗಳೂರು.
4. ಜಿಲ್ಲಾ ಖಜಾನಾಧಿಕಾರಿಗಳು, ಉತ್ತರ ಕನ್ನಡ, ಬೆಳಗಾವಿ, ಬಿಜಾಪುರ, ದಾವಣಗೆರೆ, ಧಾರವಾಡ, ರಾಮನಗರ, ತುಮಕೂರು ಮತ್ತು ಶಿವಮೊಗ್ಗ
5. ಉಪ ನಿರ್ದೇಶಕರು, ನೆಟ್‌ವರ್ಕ್ ಮ್ಯಾನೇಜ್‌ಮೆಂಟ್ ಸೆಂಟರ್ ನಂ. 49, ಸೆಕೆಂಡ್ ಬ್ಲಾಕ್, ಸೆಕೆಂಡ್ ಫ್ಲೋರ್, ಖನಿಜ ಭವನ, ಸೌತ್ ಎಂಟ್ರೆನ್ಸ್, ರೇಸ್ ಕೋರ್ಸ್ ರಸ್ತೆ, ಬೆಂಗಳೂರು.
6. ವಿಶೇಷ ಅಧಿಕಾರಿಗಳು, ಗಣಕ ಕೋಶ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಪ್ರತಿಯನ್ನು :

1. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು / ಕಾರ್ಯದರ್ಶಿಗಳು (ಪಂ.ರಾ) ರವರ ಆಪ್ತ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
3. ರಕ್ಷಾ ಕಡತಕ್ಕೆ / ಹೆಚ್ಚುವರಿ ಪ್ರತಿಗಳು.

## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ : 2013–14ನೇ ಸಾಲಿನಲ್ಲಿ ಸೌರ ಬೆಳಕು ಯೋಜನೆಯಡಿ ಶೇ. 50%ರಷ್ಟು ಅನುದಾನ ಬಿಡುಗಡೆ – ಕುರಿತು.

ಓದಲಾಗಿದೆ : 1) ಸರ್ಕಾರಿ ಆದೇಶ ಸಂಖ್ಯೆ : ಗ್ರಾಅಪ 241 ಎಫ್‌ಎನ್ 2013 ದಿನಾಂಕ : 01.08.2013 ಕ್ರ.ಸಂ. VII (45)

2) ಸರ್ಕಾರಿ ಆದೇಶ ಸಂಖ್ಯೆ : ಗ್ರಾಅಪ 5 ಗ್ರಾಇಂಕಾ 2009 ದಿನಾಂಕ : 14.07.2009

3) ಸರ್ಕಾರಿ ಪತ್ರ ಸಂಖ್ಯೆ : ಗ್ರಾಅಪ 16 ಜೈಅಯೋ 2012 ದಿನಾಂಕ : 07.07.2012 ಮತ್ತು 02.02.2013

4) ಸರ್ಕಾರಿ ಪತ್ರ ಸಂಖ್ಯೆ : ಗ್ರಾಅಪ/23/ಜೈಅಯೋ/2013 ದಿನಾಂಕ : 21.10.2013

**ಪ್ರಸ್ತಾವನೆ :**

2013–14ನೇ ಸಾಲಿನ ರಾಜ್ಯ ಆಯವ್ಯಯದಡಿ, ಉಲ್ಲೇಖ (1)ರ ಸರ್ಕಾರದ ಆದೇಶದರಿತ್ಯ ಲೆಕ್ಕ ಶೀರ್ಷಿಕೆ 2810–00–101–0–91 (2810–01–198–1–01) ಯೋಜನೆಯಡಿ ₹ 310.00 ಲಕ್ಷಗಳ ಅನುದಾನವನ್ನು, ಪ್ರಾಯೋಗಿಕ ಜಿಲ್ಲಾ ಪಂಚಾಯಿತಿಗಳಿಗೆ ಆಯ್ಕೆಯಾದ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಹಳ್ಳಿಗಳಿಗೆ ಸೌರ ಬೀದಿ ದೀಪಗಳನ್ನು ಅಳವಡಿಸುವ ಸಲುವಾಗಿ, ಹಂಚಿಕೆ ಮಾಡಲಾಗಿದೆ. ಉಲ್ಲೇಖ (2)ರ ಸರ್ಕಾರಿ ಆದೇಶದಲ್ಲಿ ಸೌರ ಬೆಳಕು ಯೋಜನೆಯನ್ನು ಜಾರಿಗೊಳಿಸಲಾಗಿದೆ. ಉಲ್ಲೇಖ (3)ರ ಪತ್ರದಲ್ಲಿ ವಿವರವಾದ ಮಾರ್ಗಸೂಚಿಗಳನ್ನು ಹೊರಡಿಸಲಾಗಿದೆ. ಉಲ್ಲೇಖ (4)ರ ಸರ್ಕಾರಿ ಪತ್ರದಲ್ಲಿ 2013–14ನೇ ಸಾಲಿನಲ್ಲಿ ಸೌರ ಬೆಳಕು ಯೋಜನೆಯನ್ನು ಅನುಷ್ಠಾನಗೊಳಿಸಲು ಪ್ರಾಯೋಜಿಕ 5 ಜಿಲ್ಲೆಗಳನ್ನು ಆಯ್ಕೆ ಮಾಡಲಾಗಿದೆ. ಈ ಯೋಜನೆಯ ಭೌತಿಕ ಗುರಿಗಳನ್ನು ನಿಗದಿಪಡಿಸಲಾಗಿದೆ. ಪ್ರಯುಕ್ತ ಮೊದಲನೇ ಮತ್ತು ಎರಡನೇ ಕಂತಿನ ಅನುದಾನವನ್ನು ಬಿಡುಗಡೆ ಮಾಡಲು ಸರ್ಕಾರವು ತೀರ್ಮಾನಿಸಿದೆ. ಪ್ರಯುಕ್ತ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 23 ಜೈಅಯೋ 2013, ಬೆಂಗಳೂರು, ದಿನಾಂಕ 16.11.2013**

ಪ್ರಸ್ತಾವನೆಯಲ್ಲಿ ವಿವರಿಸಲಾದಂತೆ, ₹ 150.00 ಲಕ್ಷಗಳನ್ನು (ರೂ. ಒಂದುನೂರ ಐವತ್ತು ಲಕ್ಷಗಳು ಮಾತ್ರ) ಮೊದಲ ಎರಡು ಕಂತಿನ ಅನುದಾನವನ್ನಾಗಿ 2013–14ನೇ ಸಾಲಿನ ಸೌರ ಬೆಳಕು ಯೋಜನೆಯ ಅನುಷ್ಠಾನಕ್ಕಾಗಿ ಲೆಕ್ಕ ಶೀರ್ಷಿಕೆ 2810–00–101–0–91 (2810–01–198–1–01) ಯೋಜನೆ ಅಡಿಯಲ್ಲಿ ಪ್ರಾಯೋಗಿಕವಾಗಿ ಆಯ್ಕೆಯಾದ ಈ ಕೆಳಕಂಡ ಜಿಲ್ಲಾ ಪಂಚಾಯಿತಗಳಿಗೆ ಬಿಡುಗಡೆ ಮಾಡಿ ಆದೇಶಿಸಲಾಗಿದೆ.

| ಕ್ರ.ಸಂ | ಜಿಲ್ಲಾ ಪಂಚಾಯತ್ | ಬಿಡುಗಡೆ ಮಾಡಲಾದ ಅನುದಾನ (ರೂ. ಲಕ್ಷಗಳಲ್ಲಿ) |
|---|---|---|
| 01 | ಉತ್ತರ ಕನ್ನಡ | 30.00 |
| 02 | ಮಂಡ್ಯ | 30.00 |
| 03 | ಕೋಲಾರ | 30.00 |
| 04 | ಗದಗ | 30.00 |
| 05 | ಯಾದಗಿರಿ | 30.00 |
| | **ಒಟ್ಟು** | **150.00** |

ಸದರಿ ಅನುದಾನವು ಹಂಗಾಮಿಯಾಗಿದ್ದು, ಮಹಾಲೇಖಪಾಲರ ಲೆಕ್ಕ ತಪಾಸಣೆಗೊಳಪಟ್ಟಿರುತ್ತದೆ. ಸದರಿ ನುದಾನವನ್ನು 31ನೇ ಮಾರ್ಚ್ 2014ರೊಳಗೆ ಉದ್ದೇಶಿತ ಕಾರ್ಯಕ್ರಮಕ್ಕಾಗಿ ವಿನಿಯೋಗಿಸತಕ್ಕದ್ದು.